**ಜೆಎಸ್‌ಎಸ್ ಮಹಿಳಾ ಕಾಲೇಜು, ಕೊಳ್ಳೇಗಾಲ**

ದಿನಾಂಕ : 18-08-2018

# ವರದಿ

## ವಾಣಿಜ್ಯ ವಿದ್ಯಾರ್ಥಿಗಳಿಗೆ ಉತ್ತಮ ಭವಿಷ್ಯವಿದೆ – ಡಾ. ಎಂ ಪ್ರಭು

### ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಪ್ರಥಮ ಎಂ.ಕಾಂ ವಿದ್ಯಾರ್ಥಿಗಳಿಗೆ ಅಭಿವಿನ್ಯಾಸ ಕಾರ್ಯಕ್ರಮ

ಕೊಳ್ಳೇಗಾಲ : ಆಗಸ್ಟ್ 16 : ವಾಣಿಜ್ಯ ವಿದ್ಯಾರ್ಥಿಗಳಿಗೆ ಉತ್ತಮ ಭವಿಷ್ಯವಿದ್ದು ಅದಕ್ಕಾಗಿ ಪರಿಶ್ರಮ ತುಂಬಾ ಮುಖ್ಯವಾಗುತ್ತದೆ. ಆದ್ದರಿಂದ ತಾವು ನಿರಂತರವಾಗಿ ಅಧ್ಯಯನದಲ್ಲಿ ತೊಡಗಿಸಿಕೊಳ್ಳಬೇಕೆಂದು ಸ್ನಾತಕೋತ್ತರ ವಿಭಾಗದ ಮುಖ್ಯಸ್ಥರಾದ ಡಾ. ಎಂ ಪ್ರಭುರವರು ತಿಳಿಸಿದರು.

ಪಟ್ಟಣದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಪ್ರಥಮ ಎಂ.ಕಾಂ ವಿದ್ಯಾರ್ಥಿಗಳಿಗೆ ಸ್ನಾತಕೋತ್ತರ ವಿಭಾಗದ ವತಿಯಿಂದ ಆಯೋಜಿಸಿದ್ದ ಅಭಿವಿನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಉತ್ತಮ ಕೌಶಲ್ಯತೆ ಹೊಂದಿದ್ದಲ್ಲಿ ಕಾರ್ಪೊರೇಟ್ ವಲಯವು ನಿಮ್ಮನ್ನೇ ಹುಡುಕಿಕೊಂಡು ಬರುತ್ತವೆ. ಪ್ರಸ್ತುತ ಜಾಗತಿಕ ಪ್ರಪಂಚದಲ್ಲಿ ಉದ್ಯೋಗ ಅವಕಾಶಗಳಿಗೆ ವಿವಿಧ ರೀತಿಯ ಕೌಶಲ್ಯ ಅಗತ್ಯವಿದ್ದು ತಾವು ತಮ್ಮ ಗುರುಗಳ ಮಾರ್ಗದರ್ಶನದಲ್ಲಿ ಸದಾ ಅನ್ವೇಷಣಾ ಪದ್ಧತಿಯಲ್ಲಿ ತೊಡಗಿಸಿಕೊಂಡು ಪ್ರಚಲಿತ ವಿಧ್ಯಮಾನಗಳ ಬಗೆಗೆ ಪ್ರೌಢಿಮೆ ಬೆಳೆಸಿಕೊಳ್ಳಬೇಕೆಂದೂ, ಕಾಲೇಜಿನಲ್ಲಿ ಲಭ್ಯವಿರುವ ಇ-ಸಂಪನ್ಮೂಲ, ಜಾಲತಾಣ ಸೌಲಭ್ಯಗಳನ್ನು ಸದುಪಯೋಗಿಸಿಕೊಂಡು ಅತ್ಯುತ್ತಮ ಜೀವನ ಕಂಡುಕೊಳ್ಳಬೇಕೆಂದು ಕರೆ ನೀಡಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಪ್ರೊ. ಉಮೇಶ ಮಾತನಾಡಿ ವಿದ್ಯಾರ್ಥಿಗಳು ಮನಸ್ಸು ಮಾಡಿದರೆ ಏನನ್ನೂ ಸಾಧಿಸಬಹುದು. ಶಿಕ್ಷಣ ಒಂದೇ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಯಶಸ್ಸು ತಂದುಕೊಡದು. ನೈಪುಣ್ಯತೆಯನ್ನು ಅಪಾರ ಪ್ರಮಾಣದಲ್ಲಿ ಹೊಂದುವ ಅವಶ್ಯಕತೆಯಿದ್ದು, ಅದಕ್ಕಾಗಿ ನಿರ್ಧಿಷ್ಠ ತರಗತಿಗಳಿರುವುದಿಲ್ಲ. ತಂತ್ರಜ್ಞಾನ ಅಭಿವೃದ್ಧಿಯಿಂದ ಇ-ಕಾಮರ್ಸ್ ಮುಂತಾದ ಕಡೆ ಸಾಕಷ್ಟು ಉದ್ಯೋಗ ಅವಕಾಶಗಳಿದ್ದು ತಂತ್ರಜ್ಞಾನದ ಸದುಪಯೋಗ ಮಾಡಿಕೊಳ್ಳಬೇಕೆಂದು ಕರೆ ನೀಡಿದರು.

ಪ್ರೊ. ಎಸ್ ಸರಸ್ವತಿ, ಪ್ರೊ. ಎಂ ಅರ್ಚನ ಹಾಗೂ ಪ್ರೊ. ಪಿ ಮಹೇಶ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಪ್ರೊ. ಪಿ ಮಹೇಶ್ ಸ್ವಾಗತಿಸಿ, ಪ್ರೊ. ಎಂ. ಅರ್ಚನ ರವರು ವಂದಿಸಿದರು.

ಪ್ರಥಮ ಎಂ.ಕಾಂ ವಿದ್ಯಾರ್ಥಿಗಳಿಗೆ ಸ್ನಾತಕೋತ್ತರ ವಿಭಾಗದ ವತಿಯಿಂದ ಆಯೋಜಿಸಿದ್ದ ಅಭಿವಿನ್ಯಾಸ ಕಾರ್ಯಕ್ರಮದಲ್ಲಿ ಡಾ. ಎಂ. ಪ್ರಭು ಮಾತನಾಡುತ್ತಿರುವುದು ಚಿತ್ರದಲ್ಲಿ ಪ್ರೊ. ಎಂ ಅರ್ಚನ, ಶ್ರೀ ಶ್ರೀನಿವಾಸ್, ಪ್ರಾಚಾರ್ಯ ಪ್ರೊ. ಉಮೇಶ, ಶ್ರೀ ಪಿ ಮಹೇಶ ಹಾಗೂ ಪ್ರೊ. ಎಸ್ ಸರಸ್ವತಿರವರನ್ನು ಕಾಣಬಹುದು.




ಕಾರ್ಯಕ್ರಮದಲ್ಲಿ ಭಾಗವಹಿಸಿರುವ ವಿದ್ಯಾರ್ಥಿ, ವಿದ್ಯಾರ್ಥಿನಿಯರುಗಳು

